ಕರ್ನಾಟಕ ವಿಧಾನ ಸಭೆ. ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಆರೋಗ್ಯ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE: 19/3/2020

# 'ತಪಾಸಣೆ ಬಿಗಿಗೊಳಿಸಿ, ಪ್ರಯೋಗಾಲಯ ಸ್ಥಾಪಿಸಿ'

ಉ.ವಾ 19/3/20

ವಿಧಾನಸಭೆ: ಕೊರೊನಾ ವೈರಸ್ ಬಗ್ಗೆ ಬುಧವಾರವೂ ಸದನದಲ್ಲಿ ಪ್ರಸ್ತಾಪವಾಯಿತು. ಸರ್ಕಾರ ಪರಿಸ್ಥಿತಿಯನ್ನು ಗಂಭೀರವಾಗಿ ಪರಿಗಣಿಸಿ ಜಿಲ್ಲಾ ಕೇಂದ್ರಗಳಲ್ಲಿ ಪ್ರಯೋಗಾಲಯ, ತಾಲೂಕು ಕೇಂದ್ರಗಳಲ್ಲಿ ಅಗತ್ಯ ವೆಂಟಲೇಟರ್ ವ್ಯವಸ್ಥೆ ಮಾಡಬೇಕು ಎಂದು ಕಾಂಗ್ರೆಸ್ ಸದಸ್ಯರು ಆಗ್ರಹಿಸಿದರು.



ಶೂನ್ಯ ವೇಳೆಯಲ್ಲಿ ಕಾಂಗ್ರೆಸ್‌ನ ಡಾ. ಅಜಯ್‌ಸಿಂಗ್ ವಿಷಯ ಪ್ರಸ್ತಾಪಿಸಿ, ಕೊರೊನಾ ಕುರಿತು ಸಾರ್ವಜನಿಕರಲ್ಲಿ ಮೂಡಿರುವ ಆತಂಕ, ಕೆಲವೆಡೆ ವೈದ್ಯಕೀಯ ಸೌಲಭ್ಯ ಇಲ್ಲದಿರುವುದು, ತಪಾಸಣೆ ಸರಿಯಾಗಿ ಆಗದಿರುವುದನ್ನು ತಿಳಿಸಿ, ಬಸ್, ರೈಲು ನಿಲ್ದಾಣ, ಗಡಿ ಭಾಗಗಳಲ್ಲೂ ತಪಾಸಣೆಗೆ ಕ್ರಮ ಕೈಗೊಳ್ಳಬೇಕು ಎಂದು ಸಲಹೆ ನೀಡಿದರು. ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಅವರು, ಒಂದೆಡೆ ಮಂಗನ ಕಾಯಿಲೆ, ಮತ್ತೊಂದೆಡೆ ಹಕ್ಕಿಜ್ವರ, ಇದರ ಜತೆಗೆ ಕೊರೊನಾ... ಹೀಗೆ ರಾಜ್ಯದ ವಿವಿಧೆಡೆ ನಾನಾ ರೀತಿಯ ಕಾಯಿಲೆಗಳು ಕಾಣಿಸಿಕೊಂಡು ಸಾರ್ವಜನಿಕರು ಆತಂಕದಲ್ಲಿದ್ದಾರೆ, ಸರ್ಕಾರ ಈ ಬಗ್ಗೆ ವಿಶ್ವಾಸ ಮೂಡಿಸುವ ಕೆಲಸ ಮಾಡಬೇಕು. ಇಲ್ಲದಿದ್ದರೆ ಜನರು ಭಯ ಭೀತರಾದರೆ ಎಲ್ಲವೂ ಏರು ಪೇರಾಗುತ್ತದೆ ಎಂದು ಹೇಳಿದರು.

ಆರೋಗ್ಯ ಸಚಿವ ಶ್ರೀರಾಮುಲು ಮಾತನಾಡಿ, ಸರ್ಕಾರ ಯುದ್ಧೋಪಾದಿಯಲ್ಲಿ ಕೆಲಸ ಮಾಡುತ್ತಿದೆ. ವೈದ್ಯಕೀಯ ಸಿಬ್ಬಂದಿ ಯೋಧರ ರೀತಿಯಲ್ಲಿ ನೆರವಾಗುತ್ತಿದ್ದಾರೆ. ಬಿಗಿ ತಪಾಸಣೆ ವ್ಯವಸ್ಥೆ ಮಾಡಲಾಗುತ್ತಿದೆ. ಸ್ವದೇಶಿ ವಿಮಾನಗಳಲ್ಲಿ ಬಂದವರನ್ನೂ ತಪಾಸಣೆಗೊಳಪಡಿಸುವ ಬಗ್ಗೆಯೂ ಕ್ರಮ ಕೈಗೊಳ್ಳಲಾಗುತ್ತಿದೆ. ಎಲ್ಲ ಜಿಲ್ಲೆಗಳಲ್ಲಿ ಪ್ರಯೋಗಾಲಯ ಸ್ಥಾಪಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಯಡಿಯೂರಪ್ಪ ಅವರು, ರಾಜ್ಯ ಸರ್ಕಾರವು ಕೊರೊನಾ, ಮಂಗನ ಕಾಯಿಲೆ, ಹಕ್ಕಿಜ್ವರ ಕುರಿತು ಗಂಭೀರವಾಗಿಯೇ ಪರಿಗಣಿಸಿ, ಕ್ರಮ ಕೈಗೊಂಡಿದೆ ಎಂದು ಹೇಳಿದರು.